ಪ್ರಸ್ತಾವಕ್ಕೆ ಒಪ್ಪಿಗೆ ದೊರೆಯಿತು. ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು.

ಶ್ರೀ ಕೆ.ಹೆಚ್. ಪಾಟೀಲ್ : ಮಾನ್ಯ ಅಧ್ಯಕ್ಷರೆ 1991ನೇ ಸಾಲಿನ ಕರ್ನಾಟಕ ವ್ಯವಸಾಯೋತ್ಪನ್ನ ಮಾರುಕಟ್ಟೆ (ನಿಯಂತ್ರಣ) ಮತ್ತು ಕೆಲವು ಇತರೆ ಕಾನೂನುಗಳು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ANNEXURE (4)

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ 1991

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಸಭಾಧ್ಯಕ್ಷರೆ, 1991ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾಪವನ್ನು ಮಂಡಿಸಲಾಯಿತು.

"1991ನೇ ಸಾಲಿನ ಕರ್ನಾಟಕ ಧನ ವಿನಿಯೋಗ ಲೇಖಾನುದಾನ ವಿಧೇಯಕವನ್ನು ಅಂಗೀಕರಿಸುವುದು" ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ಮತಕ್ಕೆ ಹಾಕುವುದು.

ಖಂಡ 2 ಮತ್ತು 3

ಅಧ್ಯಕ್ಷರು : ಪ್ರಸ್ತಾವನೆ ಏನೆಂದರೆ

"2 ಮತ್ತು 3ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕು" ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿತು. 2 ಮತ್ತು 3ನೇ ಖಂಡಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು.

"ಪ್ರಸ್ತಾವ ಹೀಗಿದೆ ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗವಾಗಿರಬೇಕು".

ಪ್ರಸ್ತಾವಕ್ಕೆ ಒಪ್ಪಿಗೆ ದೊರೆಯಿತು. ಮೊದಲನೇ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಸಬಾಧ್ಯಕ್ಷರೆ, 1991ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"1991ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆ ಅಂಗೀಕರಿಸಬೇಕು".

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿತು. ವಿಧೇಯಕ ಅಂಗೀಕರಿಸಲ್ಪಟ್ಟಿತು.

ಕರ್ನಾಟಕ ಧನ ವಿನಿಯೋಗ ವಿಧೇಯಕ 1991

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಸಭಾಧ್ಯಕ್ಷರೆ, ಕರ್ನಾಟಕ ಧನ ವಿನಿಯೋಗ ವಿಧೇಯಕ 1991 - ಇದನ್ನು ಪರ್ಯಾಲೋಚಿಸಬೇಕೆಂದು ಸೂಚನೆ ಮಾಡುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "1991ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆ ಪರ್ಯಾಲೋಚಿಸಬೇಕು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ಖಂಡ 2 ಮತ್ತು 3ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕು".

ಪ್ರಸ್ತಾವ ಅಂಗೀಕೃತವಾಯಿತು. ಮತ್ತು 2 ಮತ್ತು 3ನೇ ಖಂಡಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗವಾಗಿರಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಸಭಾಧ್ಯಕ್ಷರೆ, 1991ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"1991ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆ ಅಂಗೀಕರಿಸಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ವಿಧೇಯಕಕ್ಕೆ ಒಪ್ಪಿಗೆ ದೊರಕಿತು.

ಅಧ್ಯಕ್ಷರು : ಈಗ ಸಭೆ ಮಂದುವರೆದು ಮತ್ತೆ 4.30ಕ್ಕೆ ಸಮಾವೇಶಗೊಳ್ಳಲಿದೆ.

(ಸದನವು 3 ಗಂಟೆ 20 ನಿಮಿಷಕ್ಕೆ ಮುಕ್ತಾಯಗೊಂಡು ಮತ್ತೆ 4 ಗಂಟೆ 30 ನಿಮಿಷಕ್ಕೆ ಸಮಾವೇಶಗೊಳ್ಳಲು ನಿರ್ಧರಿಸಿತು.)

(ಪುನಃ ಸಬೆಯು 4 ಗಂಟೆ 50 ನಿಮಿಷಕ್ಕೆ ಸಮಾವೇಶಗೊಂಡಿತು)

ಉಪಾಧ್ಯಕ್ಷೆ ಶ್ರೀಮತಿ ನಾಗಮ್ಮ ಕೇಶವಮೂರ್ತಿಯವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.